**ಪ್ರಧಾನ ಸಿವಿಲ್ ನ್ಯಾಯಾಲಯ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಚಿಂಚೋಳಿ**

***ಸಿ.ಸಿ.ನಂ.2067/2024***

**ಫಿರ್ಯಾಧಿದಾರಃ** ಕರ್ನಾಟಕ ಸರ್ಕಾರದ ಪರವಾಗಿ ಅಬಕಾರಿ ಪೋಲಿಸ

// ವಿರುದ್ದ //

**ಆರೋಪಿ:** ನಾಮದೇವ

ದೋ ಷಾ ರೋ ಪ ಣೆ

ನಾನು **ಶ್ರೀ ದತ್ತುಕುಮಾರ ಜವಳಕರ. B.B.A. L.L.B (Hons) L.L.M.** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ಚಿಂಚೋಳಿ, ಈ ಕೆಳಕೆಂಡ ಆರೋಪಿ

| | |
|---|---|
| | ನಾಮದೇವ ತಂದೆ ವಿಠಲ, 32 ವರ್ಷ,<br>ವಾಸಃ ಗೋಪಿನಾಯಕ ತಾಂಡಾ, ತಾಃ ಚಿಂಚೋಳಿ. |

**ಆದ ನಿಮ್ಮ ವಿರುದ್ದ ದೋಷಿಸುವ ದೋಷಾರೋಪಣೆ ಎನೆಂದರೆ,**

ದಿನಾಂಕಃ 01-05-2023 ರಂದು ಮಧ್ಯಾಹ್ನ 01-30 ಗಂಟೆ ಸುಮಾರಿಗೆ ಚಿಂಚೋಳಿ ಪೋಲಿಸ ಠಾಣಾ ವ್ಯಾಪ್ತಿಯಲ್ಲಿ ಬರುವ ಜಿಲ್ವರ್ಷಾ ತಾಂಡಾ ಹೋಗುವ ಕ್ರಾಸ್ನಲ್ಲಿ ದ್ವಿಚಕ್ರ ವಾಹನದಲ್ಲಿ ಆರೋಪಿ ನೀನು ಯಾವುದೇ ಅಧಿಕೃತ ಪರವಾನಿಗೆ ಪಡೆಯದೆ ಅನಧಿಕೃತವಾಗಿ ಕಾನೂನು ಬಾಹಿರವಾಗಿ 180 m.l ನ 44 U.S bottles ಮತ್ತು 650 m.l ನ 12 Kind Fisher Bear ಬಾಟಲಗಳು ಮದ್ಯ ಸಾಗಾಟ ಮಾಡುತ್ತಿದ್ದ ಕಾರಣ ಆರೋಪಿ ನೀನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32 ರಡಿಯಲ್ಲಿ ಶಿಕ್ಷಾಹರ್ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞದೊಳಗೆ ಮಾಡಿರುತ್ತೀಯಾ ಎಂದು.

2. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿ ನೀನು ಮದ್ಯವನ್ನು ಸಕ್ಷಮ ಪ್ರಾಧಿಕಾರದಿಂದ ಯಾವುದೇ ಪರವಾನಗಿ/ಅನುಮತಿಯನ್ನು ಪಡೆಯಡದೆ ನಿಗದಿತ ಪ್ರಮಾಣವನ್ನು ಮೀರಿದ ಮದ್ಯವನ್ನು ಪರವಾನಗೆ ಇಲ್ಲದೆ ಹೆಚ್ಚಿನ ಲಾಭಗಳಿಸುವ ಉದ್ದೇಶದಿಂದ ಸಾರ್ವಜನಿಕರಿಗೆ ಅಕ್ರಮವಾಗಿ ಮಾರಟ ಮಾಡುವ ಕಾರಣ, ಆರೋಪಿ ನೀನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.38(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞದೊಳಗೆ ಮಾಡಿರುತ್ತೀಯಾ ಎಂದು, ನಿನ್ನ ಮೇಲೆ ಆರೋಪಣೆ ಇರುತ್ತದೆ.

ನೀನು ಮೇಲ್ಕಂಡ ಅಪರಾಧಕ್ಕಾಗಿ ಈ ನ್ಯಾಯಾಲಯದ ವಿಚಾರಣೆಗೆ ಗುರಿಯಾಗಬೇಕೆಂದು ಆದೇಶಿಸುತ್ತಿದ್ದೇನೆ.

ಪ್ರಶ್ನೆ-1: ಮೇಲೆ ಓದಿ ಹೇಳಿದ ದೋಷಾರೋಪಣೆ ನಿಮಗೆ ಅರ್ಥವಾಯಿತೆ?
ಉತ್ತರಃ ಅರ್ಥವಾಯಿತು

ಪ್ರಶ್ನೆ-2: ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಎದುರಿಸವಿರೊ?
ಉತ್ತರಃ ವಿಚಾರಣೆಯಾಗಬೇಕು

ದಿನಾಂಕಃ 04.08.2025.
ಸ್ಥಳ : ಚಿಂಚೋಳಿ

(ಶ್ರೀ ದತ್ತಕುಮಾರ ಜವಳಕರ)
ಪ್ರ.ದ.ನ್ಯಾ.ದಂಡಾಧಿಕಾರಿ,
ಚಿಂಚೋಳಿ.